<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 568 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಐವನ್ ಡಿ ಸೋಜ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರದ ಯೋಜನೆಗಳ ವಿವರಗಳನ್ನು ಪ್ರದರ್ಶಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬಂದಿರುವುದಿಲ್ಲ.<br>ಸರ್ಕಾರದ ಯೋಜನೆಗಳ ವಿವರಗಳನ್ನು ಪದರ್ಶಿಸದೇ ಇರುವ ಅಂಶಗಳು ಗಮನಕ್ಕೆ ಬಂದ ಕೂಡಲೇ ಅಂತಹ ಪ್ರಕರಣಗಳ/ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ 2016 ರ ನಿಯಮಗಳು ಮತ್ತು ಪ್ರಾಧಿಕರಣ ಷರತ್ತುಗಳನ್ವಯ ಭದ್ರತಾ ಠೇವಣಿ ಮುಟ್ಟುಗೋಲು/ದಂಡ/ಅಮಾನತ್ತು/ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು. |
| ಆ | ನ್ಯಾಯಬೆಲೆ ಅಂಗಡಿಗಳಲ್ಲಿ ಕರಾವಳಿ ಭಾಗದಲ್ಲಿ ಕೆಂಪು ಕುಚ್ಚಲು ಅಕ್ಕಿ ನೀಡಬೇಕೆಂದು ಜನರ ಬೇಡಿಕೆಯನ್ನು ಈಡೇರಿಸಲಾಗಿದೆಯೇ;(ಮಾಹಿತಿ ಒದಗಿಸುವುದು) | ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಯೋಜನೆ (PMGKAY) (Central NFSA) ಯಡಿಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ ಭಾರತ ಆಹಾರ ನಿಗಮದಿಂದ ಸಾರವರ್ಧಿತ ಅಕ್ಕಿಯನ್ನು ಬಿಡುಗಡೆಗೊಳಿಸುತ್ತಿದ್ದು, ಸದರಿ ಅಕ್ಕಿಯನ್ನು ಹಾಗೂ ರಾಜ್ಯ NFSA ಫಲಾನುಭವಿಗಳಿಗೆ OMSS(D) ಯೋಜನೆಯಡಿ ಬಿಡುಗಡೆ ಮಾಡುವ ಸಾಮಾನ್ಯ ಅಕ್ಕಿಯನ್ನು ಹಂಚಿಕೆ ನೀಡಲಾಗುತ್ತಿದೆ. |
| ಇ | ಎ.ಪಿ.ಎಲ್ ಕಾರ್ಡ್‌ದಾರರಿಗೆ ಅಕ್ಕಿ ದೊರಕುತ್ತಿಲ್ಲ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ರಾಜ್ಯದಲ್ಲಿ 2023-24ರಲ್ಲಿ ಎಷ್ಟು ಎ.ಪಿ.ಎಲ್ ಕಾರ್ಡ್‌ದಾರರಿಗೆ ಕುಚ್ಚಲು ಅಕ್ಕಿ ನೀಡಲಾಗಿದೆ? (ವಿವರ ನೀಡುವುದು) | ಹೌದು.<br>ರಾಜ್ಯದಲ್ಲಿನ ಎಪಿಎಲ್ ಕಾರ್ಡುದಾರರಿಗೆ ಯಾವುದೇ ಆಹಾರ ಧಾನ್ಯ ಹಂಚಿಕೆ ಇರುವುದಿಲ್ಲ. |

ಇ-ಆನಾಸ 29 ಆನಾಸ 2026

K H Muniyappa

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು